# ಕ.ವಿ.ಪ್ರ.ನಿ.ನಿ. ಮತ್ತು ವಿಸಕಂಗಳ ಪಿಂಚಣಿ ಮತ್ತು ಉಪದಾನ ಟ್ರಸ್ಟ್
# KPTCL AND ESCOMs PENSION AND GRATUITY TRUSTS


Ph No. 080-22291150
Fax No. 080-22223558
E-mail: pgtrustkptcl@yahoo.com

6 ನೇ ಮಹಡಿ,
ಕಾವೇರಿ ಭವನ,
ಬೆಂಗಳೂರು-560 009.


ಸಂಖ್ಯೆ. ಕೆಇಪಿಜಿಟಿ/ಕೆಸಿಒ123/ಪಿ19/2020-21/Cys-04 ದಿನಾಂಕ 23 NOV 2020

## ಸುತ್ತೋಲೆ

ವಿಷಯ: ಪಿಂಚಣಿದಾರರು/ಕುಟುಂಬ ಪಿಂಚಣಿದಾರರಿಂದ ಜೀವಿತ/ಮರು ಮದುವೆ ಪ್ರಮಾಣ ಪತ್ರಗಳನ್ನು ಪಡೆಯುವ ಹಾಗು ನಿಯತಕಾಲಿಕವಾಗಿ ಪಿಂಚಣಿದಾರರನ್ನು ಗುರುತಿಸುವ (Periodical Identification of Pensioners) ಕುರಿತು.

ಉಲ್ಲೇಖ: ನಿಗಮದ ಸುತ್ತೋಲೆ ಸಂಖ್ಯೆ ಕೆಇಪಿಜಿಟಿ/ಕೆಸಿಒ123/ಪಿ19/2014-15/ಸಿವೈಎಸ್-17 ದಿನಾಂಕ: 07.07.2014.

************

1. ಕವಿಮಂ ಲೆಕ್ಕ ಕೈಪಿಡಿ ಸಂಪುಟ-IIB (Accounts Manual Volume IIB) ಅಧ್ಯಾಯ XI – ಪಿಂಚಣಿ ಪಾವತಿ ನಿಬಂಧನೆಗಳ ಪ್ರಕಾರ ಕುಟುಂಬ ಪಿಂಚಣಿದಾರರು ವರ್ಷಕ್ಕೆ 2 ಬಾರಿ ಅಂದರೆ **ಏಪ್ರಿಲ್ ಮತ್ತು ಅಕ್ಟೋಬರ್** ಮಾಹೆಗಳಲ್ಲಿ ಪಿಂಚಣಿದಾರರು ಜೀವಿತ ಹಾಗೂ ಕುಟುಂಬ ಪಿಂಚಣಿದಾರರು ಜೀವಿತ ಮತ್ತು ಮರು ಮದುವೆ ಆಗದಿರುವ ಬಗ್ಗೆ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರಗಳನ್ನು ಪಿಂಚಣಿ ಬಟವಾಡೆ ಲೆಕ್ಕಘಟಕಗಳ ಅಧಿಕಾರಿಗಳಿಗೆ ಸಲ್ಲಿಸಬೇಕಿರುತ್ತದೆ. ಈ ರೀತಿ ಏಪ್ರಿಲ್ ಮತ್ತು ಅಕ್ಟೋಬರ್ ಮಾಹೆಗಳಲ್ಲಿ ಪ್ರಮಾಣ ಪತ್ರಗಳನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಮೇ/ನವೆಂಬರ್ ಮಾಹೆಯಿಂದ ಪಿಂಚಣಿ/ಕುಟುಂಬ ಪಿಂಚಣಿಯನ್ನು ಸದರಿ ಪ್ರಮಾಣ ಪತ್ರಗಳನ್ನು ಸಲ್ಲಿಸುವವರೆಗೂ ಸ್ಥಗಿತಗೊಳಿಸಬೇಕಿರುತ್ತದೆ.

2. ದಿನಾಂಕ 07.07.2014ರ ನಿಗಮದ ಸುತ್ತೋಲೆಯಲ್ಲಿ ಪಿಂಚಣಿ/ಕುಟುಂಬ ಪಿಂಚಣಿದಾರರ ಬದಲು ಅವರ ಹೆಸರಿನಲ್ಲಿ ಜೀವ ದೃಢೀಕರಣ ಪತ್ರವನ್ನು ಇತರೆ ಅನಧಿಕೃತ ವ್ಯಕ್ತಿಗಳು ಸಲ್ಲಿಸಿ ಅವರ ಪಿಂಚಣಿ/ಕುಟುಂಬ ಪಿಂಚಣಿಯನ್ನು ಪಡೆಯುವ ಸಾಧ್ಯತೆಯನ್ನು ತಪ್ಪಿಸುವ ದೃಷ್ಟಿಯಿಂದ **ಆರ್ಥಿಕ ವರ್ಷದಲ್ಲಿ (ಏಪ್ರಿಲ್‌ನಿಂದ ಮಾರ್ಚ್‌ವರೆಗೆ) ಕನಿಷ್ಠ ಒಂದು ಬಾರಿ** ಖುದ್ದು ಕಛೇರಿಗೆ ಹಾಜರಾಗಿ ನಿರ್ವಹಿಸಲಾಗಿರುವ ಪ್ರತ್ಯೇಕ ರಿಜಿಸ್ಟರ್‌ನಲ್ಲಿ ಪಿಂಚಣಿ/ಕುಟುಂಬ ಪಿಂಚಣಿದಾರರ ರುಜುಗಳನ್ನು ಕಡ್ಡಾಯವಾಗಿ ಪಡೆಯಲು ಹಾಗೂ ಪಿಂಚಣಿ ಬಟವಾಡೆ ಮಾಡುವ ಲೆಕ್ಕ ಘಟಕಗಳಿಗೆ ಬರಲು ವೈದ್ಯಕೀಯ/ದೈಹಿಕ ಸಮಸ್ಯೆಯಿರುವ ಪಿಂಚಣಿದಾರರನ್ನು ಗುರುತಿಸುವ ಸಲುವಾಗಿ ಸಂಬಂಧಿಸಿದ ಪಿಂಚಣಿ ಬಟವಾಡೆ ಅಧಿಕಾರಿಗಳು ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಬರುವ ಶಾಖಾಧಿಕಾರಿಗಳ/ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರುಗಳ ಸೇವೆಯನ್ನು ಪಡೆಯಲು ಆದೇಶಿಸಿದೆ.

3. ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಹಿರಿಯ ನಾಗರೀಕರನ್ನು ರಕ್ಷಿಸಲು ಕೇಂದ್ರ ಸರ್ಕಾರವು ಡಿಸೆಂಬರ್-31, 2020ರವರೆಗೂ ಜೀವಿತ ಪ್ರಮಾಣ ಪತ್ರ ಸಲ್ಲಿಸಲು ಕಾಲಾವಕಾಶ ನೀಡಿರುತ್ತದೆ. ಅದೇ ರೀತಿ ಮಾರ್ಚ್-2020 ರಿಂದ ಕೋವಿಡ್-19 ರೋಗದ ನಿಮಿತ್ತ ಲಾಕ್‌ಡೌನ್ ಜಾರಿಯಲ್ಲಿದ್ದುದ್ದರಿಂದ ಕವಿಪ್ರನಿನಿಯಲ್ಲಿಯೂ **ಜೀವಿತ/ಮರು ಮದುವೆ ಆಗದಿರುವ ಬಗ್ಗೆ ಪ್ರಮಾಣ ಪತ್ರಗಳನ್ನು ನೀಡುವ ಬದಲಿಗೆ ಒಂದು ಬಾರಿಗೆ ಮಾತ್ರ ವಿಶೇಷ ಪ್ರಕರಣವೆಂದು ಪರಿಗಣಿಸಿ ಪಿಂಚಣಿ/ಕುಟುಂಬ ಪಿಂಚಣಿದಾರರು ಖುದ್ದಾಗಿ ಕಛೇರಿಗಳಿಗೆ ಭೇಟಿ ನೀಡಿ ದಿನಾಂಕ 31-12-2020ರೊಳಗೆ ರಿಜಿಸ್ಟರ್‌ನಲ್ಲಿ ಸಹಿ ಮಾಡಲು ಅನುವು ಮಾಡಿಕೊಡಲಾಗಿದೆ.**

**ಪಿಂಚಣಿ ಬಟವಾಡೆ ಲೆಕ್ಕಘಟಕಗಳ ಅಧಿಕಾರಿಗಳು, ಪಿಂಚಣಿದಾರರಿಗೆ ಸಮಯ ನಿಗದಿಪಡಿಸಿ, ಸಾಮಾಜಿಕ ಅಂತರ ಕಾಯ್ದುಕೊಂಡು ಸಹಿ ಮಾಡಿಸಿಕೊಳ್ಳಲು ವ್ಯವಸ್ಥೆ ಮಾಡುವುದು. ಮುಂಜಾಗ್ರತಾ ಕ್ರಮಗಳಂತೆ ಪಿಂಚಣಿ/ಕುಟುಂಬ ಪಿಂಚಣಿದಾರರಿಗೆ ಮಾಸ್ಕ್ ಇಲ್ಲದೆ ಪ್ರವೇಶ ನೀಡಕೂಡದು, ಥರ್ಮಲ್ ಸ್ಕ್ರೀನಿಂಗ್ ಹಾಗೂ ಸ್ಯಾನಿಟೈಸರ್ ವ್ಯವಸ್ಥೆ ಕಡ್ಡಾಯವಾಗಿ ಮಾಡುವುದು.**

4. ಈ ಮೇಲಿನ ಅಂಶವನ್ನು ಕಛೇರಿಯ ಸೂಚನಾ ಫಲಕದಲ್ಲಿ ಸೂಚನಾ ಪತ್ರವನ್ನು ಪ್ರಕಟಿಸಲು ಕ್ರಮ ಕೈಗೊಳ್ಳುವುದು. ಅಲ್ಲದೆ. ಇ–ಮೇಲ್/ಮೊಬೈಲ್‌ಗಳಿಗೆ ಗುಂಪು ಸಂದೇಶಗಳನ್ನು (Group Message) ಕಳುಹಿಸಲು ವ್ಯವಸ್ಥೆ ಮಾಡಿ ಪಿಂಚಣಿದಾರರು/ಕುಟುಂಬ ಪಿಂಚಣಿದಾರರ ಗಮನಕ್ಕೆ ತರುವುದು.

**ವ್ಯವಸ್ಥಾಪಕ ನಿರ್ದೇಶಕರು,**
**ಕವಿಪ್ರನಿನಿರವರಿಂದ ಅನುಮೋದಿಸಲ್ಪಟ್ಟಿದೆ.**

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),
ಕವಿಪ್ರನಿನಿ.

ಪ್ರತಿಗಳು:

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ
3. ನಿರ್ದೇಶಕರು(ಹಣಕಾಸು), ಬೆವಿಕಂ, ಕೆ.ಆರ್.ವೃತ್ತ, ಬೆಂಗಳೂರು.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.ಎಸ್ಕಾಂ
5. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂ
6. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆ.ಮತ್ತು ಮಾ.ಸಂ)ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂ.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com..>eprasarana ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

1. ಎಲ್ಲಾ ಅಧೀಕ್ಷಕ ಇಂಜಿನಿಯರ್/ನಿಯಂತ್ರಣಾಧಿಕಾರಿ, ಎಲ್ಲಾ ಕವಿಪ್ರನಿನಿ/ಎಸ್ಕಾಂ
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್/ಉಪ ಲೆಕ್ಕನಿಯಂತ್ರಣಾಧಿಕಾರಿ, ಎಲ್ಲ ಕವಿಪ್ರನಿನಿ ಎಸ್ಕಾಂ
3. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ಎಲ್ಲಾ ಲೆಕ್ಕಾಧಿಕಾರಿಗಳು/ಲೆಕ್ಕಾಧಿಕಾರಿಗಳು(ಆಂ.ಪ),ಕವಿಪ್ರನಿನಿ,ಎಸ್ಕಾಂ
4. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಗಳು ಮಾಹಿತಿಗಾಗಿ:

1. ಶ್ರೀ ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ & ಕವಿಪ್ರನಿನಿ/ಬೆಸ್ಕಾಂ/ಮೆಸ್ಕಾಂ/ಗೆಸ್ಕಾಂ.ಚಾವಿಸನಿನಿ,
2. ಶ್ರೀ ಟಿ.ಎಮ್. ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ನೌಕರರ ಸಂಘ, ಬೆಂಗಳೂರು
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಇಂಜಿನಿಯರುಗಳ ಸಂಘ, ಬೆಂಗಳೂರು
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.